ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ಹೊಸ ಸಾರ್ವಜನಿಕ ಕಛೇರಿಗಳು,**
**ನೃಪತುಂಗ ರಸ್ತೆ, ಬೆಂಗಳೂರು**

**ಸಂಖ್ಯೆ : ಸಿ5(1)ವರ್ಗ-21/2016-17** **ದಿನಾಂಕ : 25/06/2016**

**ಅಧಿಕೃತ ಜ್ಞಾಪನ**

ವಿಷಯ:- 2016-17 ನೇ ಸಾಲಿನಲ್ಲಿ ಆಯುಕ್ತರ ಘಟಕದೊಳಗಿನ ಕೋರಿಕೆ ವರ್ಗಾವಣೆಗಳ ಬಗ್ಗೆ.

**ಉಲ್ಲೇಖ:**- ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 22 ಸೇನೌವ 2013 ದಿ:7-6-2013

2. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 22 ಸೇನೌವ 2013 ದಿ:14-6-2013
3. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 18 ಸೇನೌವ 2014 ಬೆಂಗಳೂರು ದಿ:6-2-2014
4. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 17 ಸೇನೌವ 2015 ಬೆಂಗಳೂರು ದಿನಾಂಕ:27-04-2015.
5. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 63 ಸೇನೌವ 2015 ಬೆಂಗಳೂರು ದಿನಾಂಕ: 01-10-2015.
6. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 25 ಸೇನೌವ 2015 ಬೆಂಗಳೂರು ದಿನಾಂಕ: 14-10-2015.
7. ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 10 ಸೇನೌವ 2016 ಬೆಂಗಳೂರು ದಿನಾಂಕ: 31-05-2016.

8 :- ಸರ್ಕಾರದ ಅಧಿಸೂಚನೆ ಸಂಖ್ಯೆ : ಇಡಿ 22 ಡಿಪಿಐ 2015 ದಿನಾಂಕ : 16/06/2016.

9 :- ಸರ್ಕಾರದ ಅಧಿಸೂಚನೆ ಸಂಖ್ಯೆ : ಇಡಿ 22 ಡಿಪಿಐ 2015 ದಿನಾಂಕ : 23/06/2016.

-*****-

**ಪ್ರಸ್ತಾವನೆ:-**

ಸರ್ಕಾರಿ ನೌಕರರ ವರ್ಗಾವಣೆಗಳ ಬಗ್ಗೆ ಉಲ್ಲೇಖ-1 ರ ಸರ್ಕಾರದ ಅದೇಶದಲ್ಲಿ ಮಾರ್ಗ ಸೂಚಿಗಳನ್ನು ಹೊರಡಿಸಲಾಗಿದೆ ಹಾಗೂ (2) ರಲ್ಲಿ ಸದರಿ ಮಾರ್ಗಸೂಚಿಗೆ ತಿದ್ದುಪಡಿಯನ್ನು ಹೊರಡಿಸಲಾಗಿದೆ. ಉಲ್ಲೇಖಿತ (1) ಮತ್ತು (2) ರುಗಳ ಸರ್ಕಾರದ ಆದೇಶಗಳಲ್ಲಿನ ಸೂಚನೆಗಳು ಹಾಗೂ ಮಾರ್ಗಸೂಚಿಗಳನ್ವಯ ಉಲ್ಲೇಖಿತ (7) ರ ಸರ್ಕಾರದ ಆದೇಶದನ್ವಯ 2016 ನೇ ಸಾಲಿನಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಕಛೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕೇತರ ವೃಂದದ ಅಧಿಕಾರಿ ಹಾಗೂ ಸಿಬ್ಬಂದಿಗಳ ವರ್ಗಾವಣೆಗಳನ್ನು ಸಕ್ಷಮ ಪ್ರಾಧಿಕಾರಿಯವಾರು ಆಯಾಯ ಕಛೇರಿಗಳಲ್ಲಿ ವರ್ಗಾವಣೆಯನ್ನು ಕೌನ್ಸಿಲಿಂಗ್ ಮೂಲಕ ಮಾಡುವ ಬಗ್ಗೆ ಉಲ್ಲೇಖಿತ (5) ರ ಈ ಕಛೇರಿಯ ಸುತ್ತೋಲೆಯಲ್ಲಿ ಸೂಚನೆಗಳನ್ನು ನೀಡಲಾಗಿದೆ.

ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರು ಪ್ರಾಧಿಕಾರವನ್ನು ಹೊಂದಿರುವ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ಪೈಕಿ 2016 ನೇ ಸಾಲಿನಲ್ಲಿ ವರ್ಗಾವಣೆಗೆ ಅರ್ಹರಿರುವರ ಅಂತಿಮ ಆದ್ಯತಾ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಸದರಿ ಅಂತಿಮ ಆದ್ಯತಾ ಪಟ್ಟಿಯನ್ವಯ ದಿನಾಂಕ : 24/06/2016 ರಂದು ಕೌನ್ಸಿಲಿಂಗ್ ನಡೆಸಲಾಗಿದೆ. ದಿನಾಂಕ : 24/06/2016 ರಂದು ನಡೆದ ಗಣಕೀಕೃತ ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ

ಬೋಧಕೇತರ ವರ್ಗದ ಅಧಿಕಾರಿ ಹಾಗೂ ಸಿಬ್ಬಂದಿಗಳು ಖುದ್ದಾಗಿ ಹಾಜರಾಗಿ ವರ್ಗಾವಣೆಗೆ ಸ್ಥಳವನ್ನು ಆಯ್ಕೆ ಮಾಡಿಕೊಂಡಿರುತ್ತಾರೆ. ಅದರಂತೆ ಅವರುಗಳಿಗೆ ವರ್ಗಾವಣೆಯನ್ನು ಮಾಡಿ ಸ್ಥಳನಿಯುಕ್ತಿಗೊಳಿಸಲು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

**ಆದೇಶ:-**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕೆಳಕಂಡ ಬೋಧಕೇತರ ವೃಂದದ ಅಧಿಕಾರಿಗಳನ್ನು ಅವರ ಹೆಸರಿನ ಮುಂದೆ ಸೂಚಿಸಿರುವ ಹುದ್ದೆ ಮತ್ತು ಸ್ಥಳಗಳಿಗೆ ಕೆಳಕಂಡ ಷರತ್ತಿಗೊಳಪಟ್ಟು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ವರ್ಗಾಯಿಸಿ ಆದೇಶಿಸಿದೆ.

| ಕ್ರಮ ಸಂಖ್ಯೆ | ಅಧಿಕಾರಿಗಳ ಸಿಬ್ಬಂಧಿಯ ಹೆಸರು, ಹುದ್ದೆ ಮತ್ತು ವಿಳಾಸ<br>ಶ್ರೀ / ಶ್ರೀಮತಿ | ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ ಆಯ್ಕೆ ಮಾಡಿ ಕೊಂಡಂತೆ ವರ್ಗಾವಣೆ ಮಾಡಿರುವ ಹುದ್ದೆ ಮತ್ತು ಸ್ಥಳ |
|---|---|---|
| | **ಪತ್ರಾಂಕಿತ ವ್ಯವಸ್ಥಾಪಕರು** | |
| 1 | ಬಿ.ಎಸ್. ಶಾಂತರಾಜ್, ಪತ್ರಾಂಕಿತ ವ್ಯವಸ್ಥಾಪಕರು, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಹರಪನಹಳ್ಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ | ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ದಾವಣಗೆರೆ ದಕ್ಷಿಣ ವಲಯ, ದಾವಣಗೆರೆ<br>(ದಿನಾಂಕ : 30/06/2016 ರಂದು ನಿವೃತ್ತಿಯಿಂದ ತೆರವಾಗುವ ಹುದ್ದೆ) |

ಷರತ್ತುಗಳು:-

1. ಕೋರಿಕೆ ವರ್ಗಾವಣೆಯಾಗಿರುವುದರಿಂದ ವರ್ಗಾವಣೆಗೊಂಡ ಅಧಿಕಾರಿಗಳು/ ಸಿಬ್ಬಂದಿಗಳು ಯಾವುದೇ ರೀತಿಯ ವರ್ಗಾವಣೆ ಭತ್ಯೆ ಹಾಗೂ ಸೇರುವಿಕೆ ಕಾಲಕ್ಕೆ ಅರ್ಹರಿರುವುದಿಲ್ಲ.
2. ಅಧಿಕಾರಿಗಳ/ಸಿಬ್ಬಂದಿಗಳ ಕೋರಿಕೆ ಮೇರೆಗೆ ವರ್ಗಾವಣೆಗೆ ಅವಕಾಶ ನೀಡಿ ಗಣಕೀಕೃತ ಕೌನ್ಸಿಲಿಂಗ್ ಮೂಲಕ ಸ್ಥಳನಿಯುಕ್ತಿ ಮಾಡಲಾಗಿದ್ದು, ಯಾವುದೇ ಸ್ಥಳ ಮಾರ್ಪಾಡಿಗೆ ಅವಕಾಶವಿರುವುದಿಲ್ಲ.
3. ವರ್ಗಾವಣೆ ಹೊಂದಿರುವ ಅಧಿಕಾರಿಗಳ / ಸಿಬ್ಬಂದಿಗಳು ಕರ್ತವ್ಯದಿಂದ ಬಿಡುಗಡೆ ಹೊಂದುವ ಪೂರ್ವದಲ್ಲಿ ಸಂಬಂಧಿಸಿದ ನಿಯಂತ್ರಣಾಧಿಕಾರಿಗಳು/ಉಪನಿರ್ದೇಶಕರು(ಆಡಳಿತ) ರವರ ಅನುಮತಿ ಪಡೆದು ಈ ಆದೇಶ ಹೊರಡಿಸಿದ ದಿನಾಂಕದಿಂದ 15 ದಿನಗಳ ಒಳಗಾಗಿ ಬಿಡುಗಡೆ ಹೊಂದಲು ತಿಳಿಸಿದೆ.
4. ವರ್ಗಾವಣೆ ಹೊಂದಿರುವ ಅಧಿಕಾರಿಗಳು/ಸಿಬ್ಬಂಧಿಗಳು ಕರ್ತವ್ಯದಿಂದ ಬಿಡುಗಡೆ ಹೊಂದಿದ ಹಾಗೂ ಕರ್ತವ್ಯಕ್ಕೆ ಹಾಜರಾದ ಬಗ್ಗೆ ಕೂಡಲೇ ಈ ಕಛೇರಿಗೆ ಮತ್ತು ಸಂಬಂಧಿಸಿದ ಎಲ್ಲಾ ಮೇಲಾಧಿಕಾರಿಗಳಿಗೆ ವರದಿ ಮಾಡುವುದು.
5. ವರ್ಗಾವಣೆ ಅರ್ಜಿಯಲ್ಲಿ ತಪ್ಪು ಮಾಹಿತಿ ನೀಡಿದ್ದಲ್ಲಿ ಅಂತಹ ಅಧಿಕಾರಿ/ಸಿಬ್ಬಂದಿಯನ್ನೇ ಪೂರ್ಣ ಜವಾಬ್ದಾರರನ್ನಾಗಿ ಪರಿಗಣಿಸಿ, ತಪ್ಪು ಮಾಹಿತಿ ನೀಡಿದ ಕಾರಣಕ್ಕಾಗಿ ಅವರ ಮೇಲೆ ಸೂಕ್ತ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದು.
6. ಸದರಿ ಅಧಿಕಾರಿಗಳು / ನೌಕರರು ವಾರ್ಗಾವಣೆಗೆ ನೀಡಿರುವ ಕಾರಣದಂತೆ ಕೌನ್ಸಿಲಿಂಗ್‌ನಲ್ಲಿ ಆದ್ಯತೆಯನ್ನು ನೀಡಲಾಗಿದ್ದು, ಸದರಿಯವರು ಸ್ಥಳ ಆಯ್ಕೆ ಪ್ರಕ್ರಿಯೆಯ ಮುಖೇನ ಸ್ಥಳ ಆಯ್ಕೆ ಮಾಡೊಕೊಂಡಿರುತ್ತಾರೆ. ಆದ್ಯತೆಯಲ್ಲಿ ವ್ಯತ್ಯಾಸವಿದ್ದಲ್ಲಿ ಅವರನ್ನು ಬಿಡುಗಡೆಗೊಳಿಸದೇ ಈ ಕಛೇರಿಗೆ ವರದಿ ಮಾಡಲು ತಿಳಿಸಿದೆ.

**[ಮಾನ್ಯ ಆಯುಕ್ತರಿಂದ ಕರಡು ಅನುಮೋದಿಸಿದೆ]**

27/6/16

[ಟಿ. ಜಯರಾಮು]

ಜಂಟಿ ನಿರ್ದೇಶಕರು(ಆಡಳಿತ) ಹೆ ಪ್ರ

ಇವರಿಗೆ :-

1. ಸಂಬಂಧಿಸಿದ ಕಛೇರಿ ಮುಖ್ಯಸ್ಥರಿಗೆ,
2. ಸಂಬಂಧಿಸಿದ ಅಧಿಕಾರಿಗಳಿಗೆ

<u>ಪ್ರತಿಯನ್ನು:-</u>

3. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
4. ಸಾರ್ವಜನಿಕ ಶಿಕ್ಷಣ ಇಲಾಖೆಯ ಸಂಬಂಧಿಸಿದ ಜಿಲ್ಲಾ ಉಪ ನಿರ್ದೇಶಕರಿಗೆ (ಆಡಳಿತ)
5. ಸಂಬಂಧಿಸಿದ ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.
6. ಕಛೇರಿ ಪ್ರತಿ